664 (1138) ಶ್ರೀ ಅಶೋಕ ಗುರಪ್ಪ ಶಾಬಾದಿ (ಸಿಂಧಗಿ) – ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಿಂಧಗಿ ವಿಧಾನಸಭಾ ವ್ಯಾಪ್ತಿಯಲ್ಲಿ ವಿತರಿಸಲಾದ APL ಹಾಗೂ BPL ಕಾರ್ಡ್‌ಗಳೇನು , (ಗ್ರಾಮವಾರು ವಿವರ ನೀಡುವುದು) ,

ಆ) ಅರ್ಹ ಫಲಾನುಭವಿಗಳನ್ನು ಗುರ್ತಿಸುವಾಗ ಲೋಪದೋಷ ಗಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ,

ಇ) ಈ ಲೋಪದೋಷಗಳನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

ಶ್ರೀ ಗೋವಿಂದ ಎಂ ಕಾರಗೋಳ (ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು) –

ಅ) ಸಿಂಧಗಿ ವಿಧಾನ ಸಭಾ ವ್ಯಾಪ್ತಿಯಲ್ಲಿ ವಿವರಿಸಿರುವ ಪಡಿತರ ಚೀಟಿಗಳ ವಿವರಗಳು ಕೆಳಕಂಡಂತಿವೆ

ಅಕ್ಷಯ				ಎಪಿಎಲ್	ಒಟ್ಟು (4+5)
ಅನ್ನಪೂರ್ಣ	ಎಎವೈ	ಅಕ್ಷಯ	ಒಟ್ಟು		
0	7382	19837	27219	19766	46985

ಗ್ರಾಮವಾರು ವಿವರಗಳು ಜಾಸ್ತಿ ಇರುವುದರಿಂದ ಮಾನ್ಯ ವಿಧಾನಸಭಾ ಸದಸ್ಯರಿಗೆ ಪ್ರತ್ಯೇಕವಾಗಿ ನೀಡಲಾಗುವುದು

ಆ) ಹೌದು

ಇ) ರಾಜ್ಯಾದ್ಯಂತ ಮನೆ ಮನೆ ಸಮೀಕ್ಷೆಯನ್ನು ಕೈಗೊಂಡು ಸಮೀಕ್ಷೆಯಲ್ಲಿ ಗುರುತಿಸಲಾದ ಫಲಾನುಭವಿಗಳಿಗೆ ಅರ್ಹತೆಗನುಗುಣವಾಗಿ ಅನ್ನಪೂರ್ಣ, ಅಂತ್ಯೋದಯ ಅನ್ನ, ಅಕ್ಷಯ, ಎಪಿಎಲ್ ತಾತ್ಕಾಲಿಕ ಪಡಿತರ ಕೂಪನ್‌ಗಳನ್ನು ವಿತರಿಸಲಾಗಿದೆ

ರಾಜ್ಯಾದ್ಯಂತ ತಾತ್ಕಾಲಿಕ ಪಡಿತರ ಚೀಟಿ ವಿತರಣೆಯಲ್ಲಿ ಹಲವು ರೀತಿಯ ಲೋಪದೋಷಗಳು ವರದಿಯಾಗಿದ್ದು, ಆ ಪೈಕಿ ವರ್ಗಾವಾರು ಅಹವಾಲುಗಳ ವಿವರ ಕೆಳಕಂಡಂತಿದೆ

1 ನ್ಯಾಯಬೆಲೆ ಅಂಗಡಿ ಬದಲಾವಣೆ

2 ಪಡಿತರ ಚೀಟಿಯಲ್ಲಿ ಹೊಸ ಕುಟುಂಬ ಸದಸ್ಯರ ಸೇರ್ಪಡೆ

3 ಪಡಿತರ ಚೀಟಿಯಲ್ಲಿ ಕುಟುಂಬ ಸದಸ್ಯರ ತೆಗೆದುಹಾಕುವ ಬಗ್ಗೆ

4 ಕುಟುಂಬದ ಮುಖ್ಯಸ್ಥರ ಬದಲಾವಣೆ

5 ಇತರೇ ಯಾವುದೇ ರೀತಿಯ ಅಹವಾಲುಗಳು, ತಿದ್ದುಪಡಿಗಳು

6 ವರ್ಗ ಬದಲಾವಣೆ ಕೋರಿರುವ ಅಹವಾಲುಗಳು

7 ಹೊಸದಾಗಿ ಪಡಿತರ ಚೀಟಿ ಕೋರಿರುವ ಅಹವಾಲುಗಳು

ಇತ್ಯಾದಿ ಎಂಬುದಾಗಿ ಒಟ್ಟು 64 70 ಲಕ್ಷ ಅಹವಾಲುಗಳು ಸ್ವೀಕೃತವಾಗಿರುತ್ತದೆ ಈಗಾಗಲೇ ಶೇಕಡಾ 80ರಷ್ಟು ಅಹವಾಲುಗಳನ್ನು ಪರಿಶೀಲಿಸಲಾಗಿರುತ್ತದೆ ಸಾರ್ವಜನಿಕರಿಂದ ಸ್ವೀಕರಿಸಲಾಗಿರುವ ಅಹವಾಲುಗಳ ಪೂರ್ಣ ವಿಲೇವಾರಿಯ ನಂತರ ತಾತ್ಕಾಲಿಕ ಪಡಿತರ ಚೀಟಿಗಳ ವಿತರಣೆಗೆ ಕ್ರಮ ಕೈಗೊಳ್ಳಲಾಗುವುದು ನಂತರ ಖಾಯಂ ಪಡಿತರ ಚೀಟಿಯನ್ನು ನೀಡಲಾಗುವುದು

665 (1140) ಶ್ರೀ ಬಾಲರಾಜ್ ಎಸ್ (ಕೊಳ್ಳೇಗಾಲ) – ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಳ್ಳೇಗಾಲ ಪಟ್ಟಣದಲ್ಲಿ ಡೊಮೆಸ್ಟಿಕ್ ಗ್ಯಾಸ್ ಸಿಲಿಂಡರ್‌ಗಳ ವಿತರಣೆಯ ಅವ್ಯವಸ್ಥೆಯಿಂದ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ,

ಆ) ಸರಿಯಾದ ರೀತಿಯಲ್ಲಿ ವಿತರಣೆ ಮಾಡದೇ ಇರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರಕ್ಕೆ ತಿಳಿದಿದೆಯೇ ,

ಇ) ತಿಳಿದಿದ್ದಲ್ಲಿ, ತೆಗೆದುಕೊಂಡ ಕ್ರಮಗಳೇನು ಹಾಗೂ ತೊಂದರೆಗಳನ್ನು ನಿವಾರಿಸಲು ಪರ್ಯಾಯ ವ್ಯವಸ್ಥೆ ಕೈಗೊಳ್ಳಲಾಗುವುದೇ ?

ಶ್ರೀ ಗೋವಿಂದ ಎಂ ಕಾರಗೋಳ (ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು) –

ಅ) ಬಂದಿದೆ

ಆ) ತಿಳಿದಿದೆ

ಇ) ಕೊಳ್ಳೇಗಾಲ ಪಟ್ಟಣಕ್ಕೆ ಕೊಳ್ಳೇಗಾಲ ಪಟ್ಟಣದಲ್ಲಿರುವ ಹೆಚ್ ಪಿ ಸಿ ಸಂಸ್ಥೆಯ ನಳಂದ ಗ್ಯಾಸ್ ಏಜೆನ್ಸಿ ಮತ್ತು ಮಳವಳ್ಳಿ ತಾಲ್ಲೂಕಿನ ಬೆಳಕವಾಡಿಯಲ್ಲಿರುವ ಬಿ.ಪಿ ಸಿ ಸಂಸ್ಥೆಯ ಕರ್ನಾಟಕ ಆಹಾರ, ಸರಬರಾಜು